## ಪ್ರೆಸ್‌ಕ್ಲಬ್‌ನ 'ವರ್ಷದ ವ್ಯಕ್ತಿ ಪ್ರಶಸ್ತಿ' ಪುರಸ್ಕೃತ ಡಾ. ಮಂಜುನಾಥ್

# ವೈದ್ಯರ ಮೇಲಿನ ಹಲ್ಲೆ ನಿಲ್ಲಲಿ

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಚಿಕಿತ್ಸೆಗೆ ಸ್ಪಂದಿಸದೆ ರೋಗಿ ಸಾವನ್ನಪ್ಪಿದರೆ ಇದಕ್ಕೆ ವೈದ್ಯರನ್ನು ಹೊಣೆ ಮಾಡಿ ಅವರ ಮೇಲೆ ಹಲ್ಲೆ ನಡೆಸಲಾಗುತ್ತಿದೆ. ಇದು ನಿಲ್ಲಬೇಕು' ಎಂದು ಜಯದೇವ ಹೃದ್ರೋಗ ಆಸ್ಪತ್ರೆಯ ನಿರ್ದೇಶಕ ಡಾ. ಸಿ.ಎನ್. ಮಂಜುನಾಥ್ ಹೇಳಿದರು.

ಬೆಂಗಳೂರು ಪ್ರೆಸ್‌ಕ್ಲಬ್ ವತಿಯಿಂದ ಗುರುವಾರ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿಯಿಂದ 'ವರ್ಷದ ವ್ಯಕ್ತಿ ಪ್ರಶಸ್ತಿ' ಸ್ವೀಕರಿಸಿ ಅವರು ಮಾತನಾಡಿದರು.

'ರೋಗಿಗಳ ಕಡೆಯವರು ವೈದ್ಯರ ಮೇಲೆ ಹಲ್ಲೆ ನಡೆಸಿದರೆ ಅವರ ಆತ್ಮಸ್ಥೈರ್ಯ ಕುಗ್ಗುತ್ತದೆ. ಇದರಿಂದಾಗಿ ವೈದ್ಯರು ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಲು ಹಿಂಜರಿಯುತ್ತಿದ್ದಾರೆ' ಎಂದರು.

'ನಕಾರಾತ್ಮಕ ಮನೋಭಾವ ಬೆಳೆಸಿಕೊಳ್ಳುವುದು ಭಯೋತ್ಪಾದನೆಗಿಂತ ದೊಡ್ಡ ಶತ್ರು ಇದ್ದಂತೆ. ಭಯೋತ್ಪಾದನೆ ಕೆಲವು ಜನರನ್ನು ಮಾತ್ರ ಬಲಿ ತೆಗೆದುಕೊಳ್ಳುತ್ತದೆ. ನಕಾರಾತ್ಮಕ ಮನೋಭಾವ ಇಡೀ ಸಮಾಜದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಹೀಗಾಗಿ ಸಕಾರಾತ್ಮಕ ಮನೋಭಾವ ಬೆಳೆಸಿಕೊಳ್ಳಬೇಕು' ಎಂದು ಹೇಳಿದರು.

'ಶೇಕಡಾ 25ರಷ್ಟು ಹೃದಯ ಸಂಬಂಧಿ ಕಾಯಿಲೆಗಳು 40ಕ್ಕಿಂತ ಕಡಿಮೆ ವಯಸ್ಸಿನವರಲ್ಲಿ ಕಾಣಿಸಿಕೊಳ್ಳುತ್ತಿರುವುದು ಆತಂಕಕಾರಿ ಸಂಗತಿ. ಹೀಗಾಗಿ ಪ್ರತಿಯೊಬ್ಬರು ನಿಯಮಿತವಾಗಿ ಆರೋಗ್ಯ ತಪಾಸಣೆಗೆ ಒಳಗಾಗಬೇಕು ಮತ್ತು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು' ಎಂದು ಕಿವಿಮಾತು ಹೇಳಿದರು.

'ಸಾರ್ವಜನಿಕರಿಗೆ ಅನಾನುಕೂಲವಾಗುವ ಕಾನೂನುಗಳಿಗೆ ತಿದ್ದುಪಡಿ ತರಬೇಕಾದ ಅಗತ್ಯ ಇದೆ. ನಾನು ಆಸ್ಪತ್ರೆಯ ನಿರ್ದೇಶಕನಾದ ಮೇಲೆ ಕಡು ಬಡವರನ್ನು ಗುರುತಿಸಿ, ಅವರಿಗೆ ಉಚಿತ ಚಿಕಿತ್ಸೆ ನೀಡುವ ಯೋಜನೆ ಜಾರಿಗೆ ತರಲಾಗಿದೆ. ಇದಕ್ಕೆ ಯಾವುದೇ ಕಾನೂನಿನ ತಿದ್ದುಪಡಿಯ ಅಗತ್ಯ ಇಲ್ಲ. ಮಾನವೀಯತೆ ಇದ್ದರೆ ಸಾಕು' ಎಂದರು.



ಪ್ರೆಸ್‌ಕ್ಲಬ್ 'ವರ್ಷದ ವ್ಯಕ್ತಿ ಪ್ರಶಸ್ತಿ' ಪುರಸ್ಕೃತ ಡಾ.ಸಿ.ಎನ್.ಮಂಜುನಾಥ್ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದರು. ವಾರ್ತಾ ಸಚಿವ ರೋಷನ್ ಬೇಗ್ ಚಿತ್ರದಲ್ಲಿದ್ದಾರೆ ಪ್ರಜಾವಾಣಿ ಚಿತ್ರ

ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, 'ಪ್ರೆಸ್‌ಕ್ಲಬ್ ವತಿಯಿಂದ ಸಾವಯವ ಕೃಷಿಕರೊಬ್ಬರನ್ನು ಗುರುತಿಸಿ 'ಕೃಷಿ ಸಾಧಕ ಪ್ರಶಸ್ತಿ' ನೀಡಿರುವುದು ಉತ್ತಮ ಕೆಲಸ. ಪ್ರಸ್ತುತ ಕೃಷಿ ಭೂಮಿ ಕಡಿಮೆಯಾಗುತ್ತಿದೆ. ಹೀಗಾಗಿ ರೈತರು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು' ಎಂದರು.

'ಯುವಕರು ಕೃಷಿಯಿಂದ ವಿಮುಖರಾಗುತ್ತಿರುವುದು ಕಳವಳಕಾರಿ ಸಂಗತಿ. ಕೃಷಿಯಿಂದ ಉತ್ತಮ ಜೀವನ ರೂಪಿಸಿಕೊಳ್ಳಲು ಸಾಧ್ಯವಿದೆ ಎಂಬುವುದನ್ನು ಯುವಕರಿಗೆ ಮನವರಿಕೆ ಮಾಡಿಕೊಡಬೇಕು' ಎಂದು ಹೇಳಿದರು.

ಕೃಷಿ ಸಾಧಕ ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಮಂಡ್ಯ ಜಿಲ್ಲೆಯ ಸಾವಯವ ಕೃಷಿಕ ಸೈಯದ್ ಘನಿ ಖಾನ್, 'ರೈತರು ಒಂದೇ ಬೆಳೆ ಬೆಳೆಯುವುದರಿಂದ ನಷ್ಟ ಅನುಭವಿಸುತ್ತಾರೆ. ಹೀಗಾಗಿ ಮಿಶ್ರ ಬೆಳೆ ಬೆಳೆಯಬೇಕು ಮತ್ತು ಸಾವಯವ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು' ಎಂದರು.

ಲೋಕೋಪಯೋಗಿ ಸಚಿವ ಡಾ. ಎಚ್.ಸಿ. ಮಹದೇವಪ್ಪ, ವಿಧಾನ ಪರಿಷತ್ ಸದಸ್ಯ ಟಿ.ಎ. ಶರವಣ, ಬೆಂಗಳೂರು ಅಭಿವೃದ್ಧಿ ಸಚಿವ ಕೆ.ಜೆ. ಜಾರ್ಜ್ ಉಪಸ್ಥಿತರಿದ್ದರು.

ಪ್ರಜಾವಾಣಿ : 1-1-2016

Page - 3A